# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಚಾಲೆಂಜ್ ಫಂಡ್ ಯೋಜನೆಯಡಿ ಸೃಜನಾತ್ಮಕವಾದ ಹಾಗೂ ಪರಿಣಾಮಕಾರಿಯಾದ ಯೋಜನೆಗಳನ್ನು ಸರ್ಕಾರದ ಇಲಾಖೆಗಳು ಹಾಗೂ ಸಂಸ್ಥೆಗಳಲ್ಲಿ ಜಾರಿಗೆ ತರುವ ಸಲುವಾಗಿ ಉತ್ತರ ಕನ್ನಡ ಜಿಲ್ಲೆಯ ಪ್ರಮುಖ ಕಡಲ ತೀರಗಳ ಸ್ವಚ್ಛತೆ ಯೋಜನೆಗೆ Beach Cleaning Machine ಖರೀದಿಸಲು ಅನುದಾನ ಬಿಡುಗಡೆ – ಕುರಿತು.

ಓದಲಾಗಿದೆ:
1) ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 92 ಇಆಸು 2009, ದಿನಾಂಕ:08.07.2010.
2) ಜಿಲ್ಲಾಧಿಕಾರಿ, ಉತ್ತರ ಕನ್ನಡ ಜಿಲ್ಲೆ ಕಾರವಾರ, ಇವರ ಪ್ರಸ್ತಾವನೆ ಸಂಖ್ಯೆ: ಪ್ರ.ಇ./ಸ.ವಿ.ಕ/ಕಾ/609/2016-17/304 ದಿನಾಂಕ: 23.06.2016.
3) ಕಡತ ಸಂಖ್ಯೆ: ಪ್ರ.ಇ 235 ಪ್ರವಾಯೋ 2016
4) ದಿನಾಂಕ: 03.02.2017 ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಚಾಲೆಂಜ್ ಫಂಡ್ ಯೋಜನೆಯ ಬಗ್ಗೆ ನಡೆದ ಸಭಾ ನಡವಳಿಗಳು.

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ದಿನಾಂಕ:08.07.2010 ರ ಸರ್ಕಾರದ ಆದೇಶದಲ್ಲಿ ಸೃಜನಾತ್ಮಕವಾದ ಹಾಗೂ ಪರಿಣಾಮಕಾರಿಯಾದ ಯೋಜನೆಗಳನ್ನು ಸರ್ಕಾರದ ಇಲಾಖೆಗಳು ಹಾಗೂ ಸಂಸ್ಥೆಗಳಲ್ಲಿ ಜಾರಿಗೆ ತರುವ ಸಲುವಾಗಿ ಚಾಲೆಂಜ್ ಫಂಡ್ ಯೋಜನೆಯನ್ನು ಸ್ಥಾಪಿಸಲಾಗಿದೆ. ಈ ಯೋಜನೆಯಲ್ಲಿ ಗುಣಮಟ್ಟದ ಗುರಿಗಳನ್ನು ಸಾಧಿಸಲು ಪ್ರಯೋಗಾತ್ಮಕ ಯೋಜನೆಗಳನ್ನು ಅನುಷ್ಠಾನಗೊಳಿಸುವ ಸಲುವಾಗಿ ಅನುದಾನವನ್ನು ಬಿಡುಗಡೆ ಮಾಡಲು ಉದ್ದೇಶಿಸಲಾಗಿದೆ. ಈ ಯೋಜನೆಗೆ ಸರ್ಕಾರವು 2016-17ನೇ ಸಾಲಿನಲ್ಲಿ ರೂ.600.00 ಲಕ್ಷಗಳನ್ನು ಮೀಸಲಿರಿಸಿದೆ.

ಓದಲಾದ (2)ರ ದಿನಾಂಕ: 23.06.2016 ರ ಪ್ರಸ್ತಾವನೆಯಲ್ಲಿ ಜಿಲ್ಲಾಧಿಕಾರಿ, ಉತ್ತರ ಕನ್ನಡ ಜಿಲ್ಲೆ ಕಾರವಾರ, ಇವರು, ಉತ್ತರ ಕನ್ನಡ ಜಿಲ್ಲೆಯು ಹಲವಾರು ಸುಂದರ ಕಡಲ ತೀರಗಳನ್ನು ಹೊಂದಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರನ್ನು ಆಕರ್ಷಿಸುವ ಸಲುವಾಗಿ ಸ್ವಚ್ಛತೆ ಮತ್ತು ನೈರ್ಮಲ್ಯವನ್ನು ಕಾಪಾಡುವ ದೃಷ್ಟಿಯಿಂದ ಕಡಲ ತೀರ ಸ್ವಚ್ಛತಾ ಯಂತ್ರವನ್ನು ಖರೀದಿಸಿ ಬಳಕೆ ಮಾಡಲು ತೀರ್ಮಾನಿಸಿದ್ದು ಉಡುಪಿ ಜಿಲ್ಲೆಯಲ್ಲಿ ಸದರಿ ಸ್ವಚ್ಛತಾ ಯಂತ್ರವು ಯಶಸ್ವಿಯಾಗಿ ಕಾರ್ಯಾಚರಣೆಯಲ್ಲಿರುತ್ತದೆ. ಈ ಹಿನ್ನಲೆಯಲ್ಲಿ ಉತ್ತರ ಕನ್ನಡ ಜಿಲ್ಲೆಯ ಕಡಲ ತೀರಗಳ ಪ್ರವಾಸೋದ್ಯಮವನ್ನು ಮತ್ತಷ್ಟು ಬಲವರ್ಧಿಸುವ ಸಲುವಾಗಿ, ಈ ಯೋಜನೆ ಅನುಷ್ಠಾನಗೊಳಿಸಲು, ಅಂದಾಜು ವೆಚ್ಚ ರೂ.100.00 ಲಕ್ಷಗಳನ್ನು ಚಾಲೆಂಜ್ ಫಂಡ್ ಯೋಜನೆಯಡಿ ಮಂಜೂರು ಮಾಡಲು ಪ್ರವಾಸೋದ್ಯಮ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಓದಲಾದ (3) ರ ಪ್ರವಾಸೋದ್ಯಮ ಇಲಾಖೆಯ ಕಡತದಲ್ಲಿ, ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು ಉತ್ತರ ಕನ್ನಡ ಜಿಲ್ಲೆಯಲ್ಲಿ ಪ್ರವಾಸೋದ್ಯಮವನ್ನು ಮತ್ತಷ್ಟು ಉತ್ತೇಜಿಸುವ ಸಲುವಾಗಿ, ಕಡಲ ತೀರಗಳ ಸ್ವಚ್ಛಗೊಳಿಸುವ ಈ ಯೋಜನೆಯನ್ನು ಅನುಮೋದಿಸಿರುತ್ತಾರೆ.

ಓದಲಾದ (4)ರಲ್ಲಿ, ಚಾಲೆಂಜ್ ಫಂಡ್ ಯೋಜನೆ ಜಾರಿಗೆ ಸಂಬಂಧಪಟ್ಟಂತೆ ಅನುದಾನ ಬಿಡುಗಡೆ ಮಾಡಲು ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ದಿನಾಂಕ: 03.02.2017 ರಂದು ನಡೆದ ಸಭೆಯಲ್ಲಿ, ಸದರಿ ಪ್ರಸ್ತಾವನೆಯಲ್ಲಿ ಜಿಲ್ಲಾಧಿಕಾರಿ, ಉತ್ತರ ಕನ್ನಡ, ಇವರು ಸಮುದ್ರ ತೀರ ಸ್ವಚ್ಛಗೊಳಿಸುವ ಯಂತ್ರ ಖರೀದಿಸಲು 100.00 ಲಕ್ಷ ಅನುದಾನ ಕೋರಿರುತ್ತಾರೆ. ಉಡುಪಿ ಜಿಲ್ಲೆಗೆ ಹಿಂದಿನ ವರ್ಷದಲ್ಲಿ 75.00 ಲಕ್ಷ ಅನುದಾನ ಮಂಜೂರು ಮಾಡಲಾಗಿದ್ದು ಇವರು ಸದರಿ ಯೋಜನೆಗಾಗಿ ರೂ. 65,98,133/- ಮೊತ್ತ ಬಳಕೆ ಮಾಡಿರುವುದರಿಂದ, ಜಿಲ್ಲಾಧಿಕಾರಿ, ಉತ್ತರ ಕನ್ನಡ ಜಿಲ್ಲೆ, ಇವರಿಗೆ, ಸಮುದ್ರ ತೀರ ಸ್ವಚ್ಛಗೊಳಿಸುವ ಯಂತ್ರ ಖರೀದಿಸುವ ಯೋಜನೆಗೆ ರೂ. 65.00 ಲಕ್ಷ ಅನುದಾನವನ್ನು ಚಾಲೆಂಜ್ ಫಂಡ್ ಅಡಿ ಮಂಜೂರು ಮಾಡಲು ಸಭೆಯಲ್ಲಿ ಒಪ್ಪಲಾಯಿತು.

ಅದರಂತೆ, ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ: 139:ಇಆಸು:2016**
**ಬೆಂಗಳೂರು, ದಿನಾಂಕ:14.03.2017.**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಸರ್ಕಾರದ ಚಾಲೆಂಜ್ ಫಂಡ್ ಯೋಜನೆಯಡಿ ಸೃಜನಾತ್ಮಕವಾದ ಹಾಗೂ ಪರಿಣಾಮಕಾರಿಯಾದ ಯೋಜನೆಗಳನ್ನು ಸರ್ಕಾರದ ಇಲಾಖೆಗಳು ಹಾಗೂ ಸಂಸ್ಥೆಗಳಲ್ಲಿ ಜಾರಿಗೆ ತರುವ ಸಲುವಾಗಿ, ಜಿಲ್ಲಾಧಿಕಾರಿ, ಉತ್ತರ ಕನ್ನಡ ಜಿಲ್ಲೆ, ಕಾರವಾರ, ಇವರು ರೂಪಿಸಿರುವ ಉತ್ತರ ಕನ್ನಡ ಜಿಲ್ಲೆಯ ಸಮುದ್ರ ತೀರಗಳ ಸ್ವಚ್ಛತಾ ಯೋಜನೆಯನ್ನು ಪುರಸ್ಕರಿಸಿ, ಈ ಯೋಜನೆಯ ಕಾರ್ಯಕ್ಕಾಗಿ Beach Cleaning Machine ಖರೀದಿಸಲು ರೂ.65.00 ಲಕ್ಷ (ಅರವತ್ತೈದು ಲಕ್ಷ ರೂಪಾಯಿಗಳು ಮಾತ್ರ) ಅನುದಾನವನ್ನು ಬಿಡುಗಡೆ ಮಾಡಲು ಮಂಜೂರಾತಿ ನೀಡಿದೆ.

ಈ ಅನುದಾನವನ್ನು ಉತ್ತರ ಕನ್ನಡ ಜಿಲ್ಲೆಯ ಜಿಲ್ಲಾಧಿಕಾರಿ ಕಾರ್ಯಾಲಯದ ಡಿ.ಡಿ.ಓ ಸಂಖ್ಯೆ: 3000RD0150ಗೆ ಬಿಡುಗಡೆ ಮಾಡಲಾಗಿದೆ. ಈ ಅನುದಾನವನ್ನು ಖಜಾನೆಯಿಂದ ಸೆಳೆದು ಜಿಲ್ಲಾಧಿಕಾರಿಯವರ ಪಿಡಿ ಖಾತೆಯಲ್ಲಿ ಇರಿಸಿ ಅಗತ್ಯತೆಗೆ ಅನುಗುಣವಾಗಿ ಖರ್ಚು ಹಾಕತಕ್ಕದ್ದು ಹಾಗೂ ಅನುದಾನ ಬಳಕೆಯ ಪ್ರಮಾಣ ಪತ್ರವನ್ನು ಯೋಜನೆ ನಿರ್ವಹಿಸುವ ಅಧಿಕಾರಿ ಸಕಾಲದಲ್ಲಿ ತಪ್ಪದೇ ಒದಗಿಸುವುದು.

ಈ ವೆಚ್ಚವನ್ನು ಲೆಕ್ಕ ಶೀರ್ಷಿಕೆ 2052-00-090-0-25-059 (ಯೋಜನೇತರ) ಆಡಳಿತ ಸುಧಾರಣೆ ಸವಾಲು ನಿಧಿ- ಅಡಿಯಲ್ಲಿ ಭರಿಸತಕ್ಕದ್ದು.

... 3

ಈ ಯೋಜನೆಯ ಕಾರ್ಯಾರಂಭದ ಮುನ್ನ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ (ಕೆ.ಟಿ.ಪಿ.ಪಿ) 4(ಜಿ) ಅಡಿ ವಿನಾಯಿತಿಯನ್ನು ಪಡೆಯುವುದು ಅವಶ್ಯಕ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 03 ಟಿಎಫ್‌ಪಿ 2016, ದಿನಾಂಕ: 02.04.2016ರಲ್ಲಿ ಆಡಳಿತ ಇಲಾಖಾ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿರುವ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ,

**(ಸುಜಾತ ಹೆಚ್.ಎಸ್.)**
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ-ತರಬೇತಿ)

**ಪ್ರತಿ:**

1. ಮಹಾಲೇಖಪಾಲರು ಕರ್ನಾಟಕ, (ಆಡಿಟ್ 1 ಮತ್ತು 2) (ಲೆಕ್ಕಪತ್ರ 1 ಮತ್ತು 2), ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಪ್ರವಾಸೋದ್ಯಮ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಜಿಲ್ಲಾಧಿಕಾರಿ, ಉತ್ತರ ಕನ್ನಡ ಜಿಲ್ಲೆ, ಕಾರವಾರ.
5. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ., ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿಆಸುಇ (ಆಸು) ರವರ ಆಪ್ತ ಕಾರ್ಯದರ್ಶಿ.
7. ಸರ್ಕಾರದ ಜಂಟಿ ಕಾರ್ಯದರ್ಶಿ, ಸಿಆಸುಇ (ಆಸು) ರವರ ಆಪ್ತ ಸಹಾಯಕರು.
8. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.